## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Gamesa Renewable Private Limited ಕಂಪನಿಗೆ ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ವಿವಿಧ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/GRPL-40MW(20+20)/HUNGUND/BAGALKOTE & KOPPAL//2016/G-1321
2. ದಿನಾಂಕ: 07.05.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

M/s Gamesa Renewable Private Limited ಕಂಪನಿಯವರು ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ಹುನಗುಂದ ಮತ್ತು ಕುಷ್ಟಗಿ ತಾಲ್ಲೂಕುಗಳ ಹುನಗುಂದ, ತಿಮ್ಮಾಪುರ್, ಅಮರಾವತಿ, ಚಿತ್ತವಡಗಿ, ಹುಚ್ಚನೂರ್, ನಾಗೂರ್, ಯಡಹಳ್ಳಿ, ವೀರಾಪುರ್, ಬನ್ನಿಹಟ್ಟಿ, ಚಿಕ್ಕಬಡವಡಗಿ ಮತ್ತು ಹಿರೇಬಡವಡಗಿ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಹಾಗೂ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ತೊಂಡಿಹಾಲ್, ಬಂಡಿಹಾಲ್, ಸಂಗನಾಲ್, ಅದೂರ್, ರಾಜೂರ್ ಮತ್ತು ದ್ಯಾಮಾಪುರ್ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಸೇರಿ ಒಟ್ಟು 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :07.05.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Gamesa Renewable Private Limited ಕಂಪನಿಯವರು ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ಹುನಗುಂದ ಮತ್ತು ಕುಷ್ಟಗಿ ತಾಲ್ಲೂಕುಗಳ ಹುನಗುಂದ, ತಿಮ್ಮಾಪುರ್, ಅಮರಾವತಿ, ಚಿತ್ತವಡಗಿ, ಹುಚ್ಚನೂರ್, ನಾಗೂರ್, ಯಡಹಳ್ಳಿ, ವೀರಾಪುರ್, ಬನ್ನಿಹಟ್ಟಿ, ಚಿಕ್ಕಬಡವಡಗಿ ಮತ್ತು ಹಿರೇಬಡವಡಗಿ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಹಾಗೂ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ತೊಂಡಿಹಾಲ್, ಬಂಡಿಹಾಲ್, ಸಂಗನಾಲ್, ಅದೂರ್, ರಾಜೂರ್ ಮತ್ತು ದ್ಯಾಮಾಪುರ್ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಸೇರಿ ಒಟ್ಟು ಸ್ಥಾಪಿಸಲು ಉದ್ದೇಶಿಸಿರುವ 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವಶಃ ಅನುಮೋದನೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಈ ಮಧ್ಯೆ, ಅಭಿವೃದ್ಧಿದಾರರು ಹಂಚಿಕೆ ಪ್ರಸ್ತಾವನೆಯೊಂದಿಗೆ ತಾವು ಸಲ್ಲಿಸಿರುವ ಡಿಎಫ್‌ಆರ್ ಅನ್ನು ಡಿಪಿಆರ್ ಎಂದು ಪರಿಗಣಿಸಿ, ನೇರವಾಗಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ. ಅಭಿವೃದ್ಧಿದಾರರ ಸದರಿ ಕೋರಿಕೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಪವನ ವಿದ್ಯುತ್ ಯೋಜನೆಯ ಹಂಚಿಕೆಯ ಪ್ರಸ್ತಾವನೆಯೊಂದಿಗೆ ಅಭಿವೃದ್ಧಿದಾರರು ಸಲ್ಲಿಸಿರುವ ಡಿಎಫ್‌ಆರ್‌ಅನ್ನು ಡಿಪಿಆರ್ ಎಂದು ಪರಿಗಣಿಸಿ, ನಿಯಮಾನುಸಾರ ನಿಗಧಿತ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸುವ ಷರತ್ತಿನೊಂದಿಗೆ ಆದೇಶ ಹೊರಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 103 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 22.07.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Gamesa Renewable Private Limited ಕಂಪನಿಯವರು ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ಹುನಗುಂದ ಮತ್ತು ಕುಷ್ಟಗಿ ತಾಲ್ಲೂಕುಗಳ ಹುನಗುಂದ, ತಿಮ್ಮಾಪುರ್, ಅಮರಾವತಿ, ಚಿತ್ತವಡಗಿ, ಹುಚ್ಚನೂರ್, ನಾಗೂರ್, ಯಡಹಳ್ಳಿ, ವೀರಾಪುರ್, ಬನ್ನಿಹಟ್ಟಿ, ಚಿಕ್ಕಬಡವಡಗಿ ಮತ್ತು ಹಿರೇಬಡವಡಗಿ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಹಾಗೂ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ತೊಂಡಿಹಾಲ್, ಬಂಡೆಹಾಳ್, ಸಂಗನಾಲ್, ಅದೂರ್, ರಾಜೂರ್ ಮತ್ತು ದ್ಯಾಮಾಪುರ್ ಗ್ರಾಮಗಳಲ್ಲಿ 20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆ ಸೇರಿ ಒಟ್ಟು 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ನಿಯಮಾನುಸಾರ ನಿಗಧಿತ ಶುಲ್ಕವನ್ನು ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಗೆ ಪಾವತಿಸುವ ಷರತ್ತಿಗೊಳಪಟ್ಟು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

**Geographical area description for 40 MW MW capacity wind power project**

| Sl.No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 56 D/4 | 20 MW (10 Nos x 2 MW) | Hungund , Timmapur, Amaravati, Chittavadgi, Huchanur, Nagur, Yadahalli, Virapur, Bannihatti, Chikka Badvadgi & Hirebadvadgi Villages of Hungund & Kustagi Taluks, Bagalkote & Koppal Districts. | The Proposed area is the ground level plain and has moderate elevation. It has presence Hungund halla and NH-13. The area is located North and South of Hungund town. The identified area is surrounded by the points A, B, C, D and are held in the following Geographical co-ordinates as:<br>**Point A:**Lat:16°0'0"N, Long: 76°0'0"E<br>**Point B:**Lat:16°8'44.66"N, Long: 76°0'0"E<br>**Point C:**Lat:16°8'46.68"N, Long: 76°5'3.37"E<br>**Point D:**Lat:16°0'0"N, Long:76°5'0"E<br>**Peaks:** 539, 523, 526, 559, 581, 578, 537, 534, 603 and 535m AMSL. |

---3)

| | | | | |
|---|---|---|---|---|
| 2 | 48 M/14 | 20 MW<br><br>(10 Nos x 2 MW) | Tondehal , Bandehal, Sangnal, Adur, Rajur & Dymapur villages of Yelburga & Kustagi Taluks, Koppal District. | It is ground level plain, spreads around Bandehal and Tondehal. It appears to be agricultural land and has scattered plantati[illegible] and moderate elevation varying from 620 to [illegible] m. The identified area is surrounded by points A, B, C, D and are held in the following Geographical co-ordinates as:<br>**Point A**:Lat:15°30'0"N, Long: 75°51'45"E<br>**Point B**:Lat:15°35'0"N, Long: 75°51'39.24"E<br>**Point C**:Lat:15°35'0"N, Long: 75°57'32.4"E<br>**Point D**:Lat:15°30'0"N, Long:75°57'36.36"E<br>**Peaks:** 637, 615, 617, 622, 628, 609, 619, 629, 623, 614 & 625m AMSL. |
| | Total | **40 MW** | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೂಡ ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

---4)

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಸದರಿ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್),**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು - 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.
4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

----5)